# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 194 (1513) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ತಿಪ್ಪಣ್ಣಪ್ಪ ಕಮಕನೂರ |
| ಉತ್ತರಿಸುವ ದಿನಾಂಕ | : | 21-03-2025 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘ, ಜಿಲ್ಲಾ ಸಮಿತಿ, ಕಲಬುರಗಿ ಇವರ ಬೇಡಿಕೆಗಳೇನು; | ಕರ್ನಾಟಕ ರಾಜ್ಯ ಸರ್ಕಾರಿ ಹಾಸ್ಟೆಲ್ ಮತ್ತು ವಸತಿ ಶಾಲಾ ಹೊರಗುತ್ತಿಗೆ ನೌಕರರ ಸಂಘ, ಜಿಲ್ಲಾ ಸಮಿತಿ, ಕಲಬುರಗಿ ಇವರು ಜಿಲ್ಲಾಧಿಕಾರಿಗಳ ಮುಖಾಂತರ ಮಾನ್ಯ ಮುಖ್ಯಮಂತ್ರಿಯವರಿಗೆ ವಿಳಾಸಿಸಿ ದಿನಾಂಕ: 20-01-2025ರಂತೆ ಸಲ್ಲಿಸಿರುವ ಬೇಡಿಕೆಗಳು ಕೆಳಗಿನಂತಿವೆ.<br><br>1) ಕನಿಷ್ಟ ವೇತನ ರೂ.31,000/- ನಿಗದಿಪಡಿಸಬೇಕು.<br><br>2) ನಿವೃತ್ತಿವರೆಗೆ ಸೇವಾ ಭದ್ರತೆ ಕೊಡಬೇಕು.<br><br>3) 10 ವರ್ಷಗಳ ಮೇಲ್ಪಟ್ಟು ಸೇವೆ ಸಲ್ಲಿಸಿದ ನೌಕರರಿಗೆ ಕ್ಷೇಮಾಭಿವೃದ್ಧಿ ಯೋಜನೆಯಲ್ಲಿ ನೇಮಕಾತಿ ಮಾಡಬೇಕು.<br><br>4) ಬೀದರ ಮಾದರಿಯಲ್ಲಿ ಸಹಕಾರಿ ಸಂಘದ ಮೂಲಕ ವೇತನ ಪಾವತಿಸಬೇಕು.<br><br>5) ಸಿಬ್ಬಂದಿಗಳ ಕಡಿತ ಮಾಡಿದ ಆದೇಶ ವಾಪಸ್ ಪಡೆಯಬೇಕು. ಹಿಂದಿನಂತೆ 100 ವಿದ್ಯಾರ್ಥಿಗಳಿಗೆ 5 ಜನ ಸಿಬ್ಬಂದಿಗಳು ಇರಬೇಕು.<br><br>6) ಖಾಯಂ ನೌಕರರ ಸ್ಥಳದಲ್ಲಿ ಮಾತ್ರ ಖಾಯಂ ನೌಕರರ ವರ್ಗಾವಣೆ ಮಾಡಬೇಕು.<br><br>7) ವಾರಕ್ಕೊಂದು ರಜೆ ಕಡ್ಡಾಯವಾಗಿ ಕೊಡಬೇಕು.<br><br>8) ಖಾಯಂ ನೌಕರರು 15 ದಿನಕ್ಕಿಂತ ಹೆಚ್ಚು ರಜೆ ಹಾಕಿದಾಗ ಆ ಸ್ಥಳದಲ್ಲಿ ತಾತ್ಕಾಲಿಕವಾಗಿ ಹೊರಗುತ್ತಿಗೆ ನೌಕರರನ್ನು ನೇಮಿಸಬೇಕು.<br><br>9) ಬಿ.ಸಿ.ಎಂ ಮತ್ತು ಅಲ್ಪಸಂಖ್ಯಾತರ ಬಾಲಕರ ವಸತಿ ನಿಲಯಗಳಿಗೆ ರಾತ್ರಿ ಕಾವಲುಗಾರರನ್ನು ನೇಮಿಸಬೇಕು.<br><br>10) ಬಾಕಿ ವೇತನ ಪಾವತಿಸಬೇಕು. |

| | | |
|---|---|---|
| ಆ) | ಹಾಸ್ಟೆಲ್ ಹಾಗೂ ವಸತಿ ಶಾಲೆ ಕಾಲೇಜುಗಳ ಹೊರಗುತ್ತಿಗೆ ಸಿಬ್ಬಂದಿಗಳಿಗೆ ಕನಿಷ್ಠ ವೇತನ ಹಾಗೂ ಇತರ 7 ಬೇಡಿಕೆಗಳ ಬಗ್ಗೆ ಸರ್ಕಾರ ಸ್ಪಂದಿಸಿ ಅವರ ಎಲ್ಲಾ ಬೇಡಿಕೆಗಳನ್ನು ಈಡೇರಿಸಲು ಮುಂದಾಗುವುದೇ? | ಹೊರಸಂಪನ್ಮೂಲ ಸಿಬ್ಬಂದಿಗಳ ಬೇಡಿಕೆಗಳಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.<br><br>(1) ಹೊರಸಂಪನ್ಮೂಲ ನೌಕರರಿಗೆ ಕಾರ್ಮಿಕ ಇಲಾಖೆಯು ಕಾಲಕಾಲಕ್ಕೆ ನಿಗದಿಪಡಿಸಿದ ಕನಿಷ್ಠ ವೇತನ ದರದಂತೆ Zone-01, Zone-02, Zone-03 & Zone-04 ರಂತೆ ವೇತನ ಪಾವತಿಗೆ ಕ್ರಮ ಕೈಗೊಳ್ಳಲಾಗಿದೆ.<br><br>(2) ಹೊರಸಂಪನ್ಮೂಲ ಸೇವೆ ಮೇರೆಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳುತ್ತಿರುವುದರಿಂದ ಪ್ರಸ್ತುತ ಇರುವ ನಿಯಮಾವಳಿಗಳಂತೆ ನಿವೃತ್ತಿವರೆಗೆ ಸೇವಾ ಭದ್ರತೆ ಕಲ್ಪಿಸಲು ಅವಕಾಶವಿರುವುದಿಲ್ಲ.<br><br>(3) ಕರ್ನಾಟಕ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಅಧಿನಿಯಮ 2012 ರಂತೆ ಏಪ್ರಿಲ್ 10, 2006 ಕ್ಕೆ ನಿರಂತರವಾಗಿ 10 ವರ್ಷಗಳ ಸೇವೆಯನ್ನು ಪೂರ್ಣಗೊಳಿಸಿದ ದಿನಗೂಲಿ ನೌಕರರಿಗೆ ಮಾತ್ರ ಈ ಅಧಿನಿಯಮದಡಿ ಸೇವಾ ಭದ್ರತೆ ಕಲ್ಪಿಸಲು ಅವಕಾಶವಿರುತ್ತದೆ. ಕಲಬುರಗಿ ಜಿಲ್ಲೆಯಲ್ಲಿ ಗ್ರೂಪ್-ಸಿ ವೃಂದದ 06, ಗ್ರೂಪ್-ಡಿ ವೃಂದದ 52 ಒಟ್ಟು 58 ನೌಕರರು ಸೇವಾ ಭದ್ರತೆಯಡಿ ಕಾರ್ಯನಿರ್ವಹಿಸುತ್ತಿದ್ದಾರೆ.<br><br>(4) ಜಿಲ್ಲಾಧಿಕಾರಿಗಳು, ಕಲಬುರಗಿ ರವರು ದಿನಾಂಕ: 10.03.2025 ರಲ್ಲಿ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿ ರಚನೆ ಮಾಡಿದ್ದು, ಸದರಿ ಸಮಿತಿಯಲ್ಲಿ ಜಿಲ್ಲಾ ಕಾರ್ಮಿಕ ಅಧಿಕಾರಿಗಳು ಸದಸ್ಯ ಕಾರ್ಯದರ್ಶಿಯಾಗಿದ್ದು, ಸದರಿ ಸಮಿತಿಯು ಸಲ್ಲಿಸುವ ವರದಿಯ ನಂತರ ಪರಿಶೀಲಿಸಿ, ಸೂಕ್ತ ಕ್ರಮ ಜರುಗಿಸಲಾಗುವುದು.<br><br>(5) ಸಮಾಜ ಕಲ್ಯಾಣ ಇಲಾಖೆಯಲ್ಲಿನ ವಿದ್ಯಾರ್ಥಿನಿಲಯಗಳಿಗೆ ಪ್ರವೇಶಾತಿ ಕೋರಿ, ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ವಿದ್ಯಾರ್ಥಿಗಳನ್ನು ದಾಖಲಾತಿ (Hostel for All) ಮಾಡಿಕೊಳ್ಳಲಾಗುತ್ತಿದೆ. ವಿದ್ಯಾರ್ಥಿಗಳ ದಾಖಲಾತಿ ಸಂಖ್ಯೆಗನುಗುಣವಾಗಿ |

| | | |
|---|---|---|
| | | ಹೊರಸಂಪನ್ಮೂಲ ಸೇವೆ ಮೇರೆಗೆ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲು ಸರ್ಕಾರದ ಆದೇಶ ದಿನಾಂಕ: 17.04.2023 ರಲ್ಲಿ ಪ್ರಮಾಣಿತ ಮಾದರಿಯನ್ನು(Staff Pattern) ಒದಗಿಸಲಾಗಿದ್ದು, ಅದರಂತೆ 101 ರಿಂದ 125 ವಿದ್ಯಾರ್ಥಿಗಳ ಸಂಖ್ಯೆ ಇದ್ದಲ್ಲಿ 05 ಜನ ಹೊರ ಸಂಪನ್ಮೂಲ ಸಿಬ್ಬಂದಿಗಳ ಸೇವೆಯನ್ನು ಪಡೆಯಲು ಕ್ರಮವಹಿಸಲಾಗಿದೆ.<br><br>(6) ಹೊರಸಂಪನ್ಮೂಲ ಸಿಬ್ಬಂದಿಗಳ ಸೇವೆಯನ್ನು ತಾತ್ಕಾಲಿಕವಾಗಿ ಜಿಲ್ಲಾ ಹಂತದಲ್ಲಿ ಕೆ.ಟಿ.ಪಿ.ಪಿ ನಿಯಮದನ್ವಯ ಟೆಂಡರ್ ನಲ್ಲಿ ಆಯ್ಕೆಗೊಂಡ ಹೊರಸಂಪನ್ಮೂಲ ಏಜೆನ್ಸಿ ಮುಖೇನ ಒಂದು ವರ್ಷದ ಅವಧಿಗೆ ಸಿಬ್ಬಂದಿ ಸೇವೆ ಪಡೆಯಲಾಗುತ್ತಿದೆ. ಆದುದರಿಂದ ಖಾಯಂ ನೌಕರರನ್ನು ಸರ್ಕಾರದ ವರ್ಗಾವಣೆ ಮಾರ್ಗಸೂಚಿಗಳನ್ವಯ ಖಾಲಿ ಸ್ಥಳಗಳಿಗೆ ವರ್ಗಾವಣೆ ಮಾಡಲು ಯಾವುದೇ ನಿರ್ಬಂಧಗಳಿರುವುದಿಲ್ಲ.<br><br>(7) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರು ದಿನಾಂಕ:19.07.2024 ರ ಪತ್ರದಲ್ಲಿ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ವಾರಕ್ಕೊಂದು ರಜೆ ನೀಡುವ ಕುರಿತು ನಿರ್ದೇಶನ ನೀಡಿರುತ್ತಾರೆ. ಅದರಂತೆ ಸ್ಥಳೀಯ ಮಟ್ಟದಲ್ಲಿ ಕ್ರಮವಹಿಸಲಾಗುತ್ತಿದೆ.<br><br>(8) ಖಾಯಂ ನೌಕರರು ದೀರ್ಘ ರಜೆಯ ಮೇಲೆ ತೆರಳಿದಲ್ಲಿ, ತಾಲ್ಲೂಕು ಮಟ್ಟದಲ್ಲಿ ಕೆಲಸದ ಒತ್ತಡ ಕಡಿಮೆ ಇರುವ ವಿದ್ಯಾರ್ಥಿ ನಿಲಯದ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳುವ ಮೂಲಕ ನಿಲಯದ ಸುಸೂತ್ರ ನಿರ್ವಹಣೆಗೆ ಕ್ರಮವಹಿಸಲಾಗುತ್ತಿದೆ.<br><br>(9) ಪ್ರತಿ ಮಾಹೆ 5ನೇ ತಾರೀಖಿನೊಳಗೆ ವೇತನ ಪಾವತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ ಹಾಗೂ ಬಾಕಿ ವೇತನ ಪಾವತಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಕಇ 273 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**